# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಸ್.ಕಿರಣ್ ಕುಮಾರ್, ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಬಳ್ಳಾರಿ. ಮತ್ತು ಇತರರನ್ನು ಕ್ರಿಮಿನಲ್ ಮೊಕದ್ದಮೆ/ಇಲಾಖಾ ವಿಚಾರಣೆ ಬಾಕಿ ಇಟ್ಟು ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ.

**ಓದಲಾಗಿದೆ:-** ಪೋಲಿಸ್ ಸಬ್ ಇನ್ಸಪೆಕ್ಟರ್, ಮೋಕಾ ಪೋಲಿಸ್ ಠಾಣೆ, ಬಳ್ಳಾರಿ ಇವರ ಪ್ರಥಮ ವರ್ತಮಾನ ವರದಿ ಸಂಖ್ಯೆ:0146/2011 ದಿನಾಂಕ:22-12-2011.

**ಪ್ರಸ್ತಾವನೆ:**

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ದಿನಾಂಕ:01-04-2010 ರಿಂದ 31-03-2011ನೇ ಸಾಲಿನಲ್ಲಿ ಎಂ.ಗೋನಾಳ್ ಗ್ರಾಮದಲ್ಲಿ ರಸ್ತೆ ಕಾಮಗಾರಿ ಮತ್ತು ಒಳಚರಂಡಿ ನಿರ್ಮಾಣಕ್ಕೆ ಅಂದಾಜು ಮೊತ್ತ ರೂ. 9.00 ಲಕ್ಷಗಳು ನಿಗದಿಯಾಗಿದ್ದು, ಕಾಮಗಾರಿಯಾಗದೆ ಒಂದೇ ಕಾಮಗಾರಿಗೆ ಎರಡು ಅಂದಾಜು ಪಟ್ಟಿ ತಯಾರಿಸಿ ಸಧ್ಯಕ್ಕೆ ಲಭ್ಯವಿರುವ ದಾಖಲೆಗಳ ಪ್ರಕಾರ ರೂ. 3,49,982-ಗಳನ್ನು ಕೆಲಸ ಮಾಡಿದೆ ಎಂದು ಹೇಳಿ ಖೊಟ್ಟಿ ದಾಖಲೆಗಳನ್ನು ಸೃಷ್ಟಿ ಮಾಡಿಕೊಂಡು, ಸುಳ್ಳು ಲೆಕ್ಕ ಪತ್ರಗಳನ್ನು ಬರೆದು ಹಣವನ್ನು ಪಾವತಿಸಿಕೊಂಡು ಶ್ರೀ ಎಸ್.ಕಿರಣ್ ಕುಮಾರ್, ತಾಂತ್ರಿಕ ಸಹಾಯಕ, ಶ್ರೀ ಜಾಕೀರ್ ಹುಸೇನ್, ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) ಮತ್ತು ಶ್ರೀ ವೆಂಕಟರಮಣ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಬಳ್ಳಾರಿ (ಪ್ರಸ್ತುತ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ದೇವದುರ್ಗ) ಮತ್ತು ಇತರರುಗಳು ಸರ್ಕಾರಕ್ಕೆ ಮೋಸ ಮಾಡಿದ್ದಾರೆಂದು ಶ್ರೀ ಕೆ.ರಾಧಕೃಷ್ಣ ತಂದೆ ಕೆ.ತಿಪ್ಪಾರೆಡ್ಡಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಬಳ್ಳಾರಿ ಇವರು ದೂರು ನೀಡಿದ್ದರ ಮೇರೆಗೆ ಮೇಲೆ ಓದಲಾದ ದಿನಾಂಕ. 22-12-2011 ರಂದು ಪೋಲಿಸ್ ಸಬ್ ಇನ್ಸಪೆಕ್ಟರ್, ಮೋಕಾ ಪೋಲಿಸ್ ಠಾಣೆ, ಬಳ್ಳಾರಿ ಇವರು ಪ್ರಥಮ ವರ್ತಮಾನ ವರದಿ ಸಂಖ್ಯೆ:0146/2011 ನ್ನು ದಾಖಲಿಸಿರುತ್ತಾರೆ.

ಸದರಿ ಪ್ರಥಮ ವರ್ತಮಾನ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ಇದೊಂದು ಕ್ರಿಮಿನಲ್ ಅಪರಾಧವಾಗಿರುವುದರಿಂದ ಆರೋಪಿತ ಅಧಿಕಾರಿಗಳು ಕರ್ತವ್ಯದಲ್ಲಿ ಮುಂದುವರಿದಲ್ಲಿ ದಾಖಲೆ/ ಸಾಕ್ಷಿಗಳನ್ನು ನಾಶಪಡಿಸುವ ಸಂಧರ್ಭ/ಸನ್ನಿವೇಶ ಇರುವುದರಿಂದ ಸದರಿ ಅಧಿಕಾರಿಗಳನ್ನು ಸೇವೆಯಿಂದ ಅಮಾನತ್ತುಗೊಳಿಸಲು ಸರ್ಕಾರವು ನಿರ್ಧರಿಸಿದೆ. ಅದ್ದರಿಂದ ಈ ಕೆಳಕಂಡ ಆದೇಶ:-

**ಆದೇಶ ಸಂಖ್ಯೆ ಗ್ರಾಅಪ 409 ಜಿಪಅ 2011, ಬೆಂಗಳೂರು, ದಿನಾಂಕ: 10-02-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಗಳು, 1957ರ ನಿಯಮ 10 (1) (ಡಿ) ರನ್ವಯ ಈ ಕೆಳಕಂಡ ಅಧಿಕಾರಿಗಳ ವಿರುದ್ಧದ ಕ್ರಿಮಿನಲ್ ಮೊದ್ದಮೆ / ಇಲಾಖಾ ವಿಚಾರಣೆಯನ್ನು ಬಾಕಿಯಿಟ್ಟು, ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸೇವೆಯಿಂದ ಅಮಾನತ್ತುಗೊಳಿಸಿದೆ ಹಾಗೂ ಇವರ ಹುದ್ದೆಯ ಸ್ಥಾನ(ಲೀನ್)ವನ್ನು

ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಬೆಂಗಳೂರು ರವರ ಕಚೇರಿಗೆ ವರ್ಗಾಯಿಸಿದೆ:-

1. ಶ್ರೀ ಎಸ್.ಕಿರಣ್ ಕುಮಾರ್, ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಬಳ್ಳಾರಿ.
2. ಶ್ರೀ ಜಾಕೀರ್ ಹುಸೇನ್, ಅಂದಿನ ಕಿರಿಯ ಇಂಜಿನಿಯರ್ (ವಿಶೇಷ ದರ್ಜೆ) (ಪ್ರಸ್ತುತ ಸಹಾಯಕ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ)
3. ಶ್ರೀ ವೆಂಕಟರಮಣ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಬಳ್ಳಾರಿ (ಪ್ರಸ್ತುತ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ದೇವದುರ್ಗ)

ಅಮಾನತ್ತಿನ ಅವಧಿಯಲ್ಲಿ ಸದರಿ ಅಧಿಕಾರಿಗಳು ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೇ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 98ರ ಅನುಸಾರ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

10/2/2012
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ/ರಾಯಚೂರು
5. ಶ್ರೀ ಎಸ್.ಕಿರಣ್ ಕುಮಾರ್, ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಬಳ್ಳಾರಿ.
6. ಶ್ರೀ ಜಾಕೀರ ಹುಸೇನ್, ಸಹಾಯಕ ಯೋಜನಾಧಿಕಾರಿ, (ಸ್ವತಂತ್ರ ಪ್ರಭಾರ) ಡಿ.ಆರ್.ಡಿ.ಎ.ಕೋಶ, ಜಿಲ್ಲಾ ಪಂಚಾಯತ್, ಬಳ್ಳಾರಿ.
7. ಶ್ರೀ ವೆಂಕಟರಮಣ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಬಳ್ಳಾರಿ (ಪ್ರಸ್ತುತ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ದೇವದುರ್ಗ)
8. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
9. ಗ್ರಾ.ಅ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿಯವರು (ಆಡಳಿತ) ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
10. ಮಾಹಿತಿ ಕೇಂದ್ರ : ಹೆಚ್ಚುವರಿ ಪ್ರತಿ:ರಕ್ಷಾ ಕಡತ : ಕಂಪ್ಯೂಟರ್ ಸೆಲ್.